ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರಃ1828/2015

ಚಾಸಾಃ5 ಪ್ರಾಸಾಃ1

ದಿನಾಂಕಃ 20.06.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಮ ಪೂಜಾರಿ |
| ತಂದೆಯ ಹೆಸರು | : | ಬಚ್ಚ ಪೂಜಾರಿ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ ಸ್ಥಳ | : | ಕೋಟೇಶ್ವರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ಸಾಕ್ಷಿಗೆ ದಿಃ 31-03-2015ರ ಸ್ಥಳ ಪಂಚನಾಮೆ ತೋರಿಸಿದ್ದು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-1 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಎಲ್ಲಿ ಯಾವಾಗ ಮಾಡಿರುತ್ತೇನೆ ಎಂದು ತಿಳಿದಿಲ್ಲ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ.

ಸಾಕ್ಷಿಗೆ ಕೊಡಲಿ, ಶಿಲೆ ಕಲ್ಲು, ಬೊಂಡವನ್ನು ತೋರಿಸಲಾಗಿ ಅವುಗಳನ್ನು ನೋಡಿ ಗುರುತಿಸಿಲ್ಲ. ಅದನ್ನು ಮುಮಾ1 ರಿಂದ 3 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ದಿಃ 31-03-2015 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-2ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-6 ರವರ ಸಮಕ್ಷಮ ಸಂಜೆ 4 ರಿಂದ 4-45 ರವರೆಗೆ ಪಂಚನಾಮೆ ತಯಾರಿಸಿ ಮುಮಾ1 ರಿಂದ 3ನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ

ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**